which will be transferred to Tourism Department to create Tourism Infrastructure.

However after getting the statistics of the tourist arrivals and completion of transfer of the said land the Department would prepare the concept plan subject to the availability of funds.

406 (675) ಶ್ರೀ ಮಿರಾಜುದ್ದೀನ್ ಪಟೇಲ್ (ಹುಮನಾಬಾದ್) :- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನ ಮನ್ನಾವಖಿಳ್ಳಿ ಬಸ್ ನಿಲ್ದಾಣ ತುಂಬಾ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಬಸ್ ನಿಲ್ದಾಣವು ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿ ಬರುತ್ತಿದ್ದು ಸುಸಜ್ಜಿತ ನಿಲ್ದಾಣವಿಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ;

ಇ) ಹಾಗಿದ್ದಲ್ಲಿ, ಈ ನಿಲ್ದಾಣ ಕಾಮಗಾರಿ ಕೆಲಸವನ್ನು ಯಾವಾಗ ಪ್ರಾರಂಭ ಮಾಡಲಾಗುವುದು ಹಾಗೂ ಇದಕ್ಕೆ ತಗಲುವ ವೆಚ್ಚವೆಷ್ಟು?

ಶ್ರೀ ಎನ್. ಚೆಲುವರಾಯಸ್ವಾಮಿ (ಸಾರಿಗೆ ಸಚಿವರು) :

ಅ) ಬಂದಿರುತ್ತದೆ.

ಆ) ಬಂದಿರುತ್ತದೆ.

ಇ) ಈ ಬಸ್ ನಿಲ್ದಾಣದ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿ ಪ್ರಾರಂಭಿಸುವ ಯೋಜನೆ ಇರುತ್ತದೆ. ಈ ಕಾಮಗಾರಿಯ ಅಂದಾಜು ಮೊತ್ತ ರೂ.10.00 ಲಕ್ಷಗಳಾಗಿರುತ್ತದೆ.

407 (677) ಶ್ರೀ ಮಿರಾಜುದ್ದೀನ್ ಪಟೇಲ್ (ಹುಮನಾಬಾದ್) :- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನಲ್ಲಿರುವ ಆರ್.ಟಿ.ಓ. ಕಛೇರಿಯ ವೇಂಬ್ರಿಡ್ಜ್ (ಹಳೆಯ) ಜಾಗವನ್ನು ಖಾಸಗಿಯವರು ಒತ್ತುವರಿ ಮಾಡಿರುವುದು ನಿಜವೇ;